ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೌಶಲ್ಯಾಭಿವೃದ್ಧಿ ಬಗ್ಗೆ ವಿವರ

ಶ್ರೀ ಸಿ. ಎಂ.ಲಿಂಗಪ್ಪ(ನಾಮನಿರ್ದೇಶನ ಹೊಂದಿದವರು) –

45 (122) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ 2 ವರ್ಷಗಳಿಂದ ಈವರೆವಿಗೂ ಬೆಂಗಳೂರು ನಗರ/ ಬೆಂಗಳೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಯೋಜನೆಗಳ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಪ್ರತ್ಯೇಕ ಹೆಸರು, ಯೋಜನೆಗಳ ವಿವರ ನೀಡುವುದು)

(ಆ) ಬೆಂಗಳೂರು ನಗರ/ ಬೆಂಗಳೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಕೈಗಾರಿಕಾ ತರಬೇತಿ ಕೇಂದ್ರಗಳಿವೆ; (ವಿವರ ನೀಡುವುದು)

(ಇ) ನಿರುದ್ಯೋಗ ನಿವಾರಣೆಯ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಯೋಜನೆಗಳಾವುವು ; ಹೊಸ ಕೈಗಾರಿಕಾ ತರಬೇತಿ ಕೇಂದ್ರ ಸ್ಥಾಪಿಸಲು ಸರ್ಕಾರದ ಮುಂದಿರುವ ಕ್ರಮವೇನು?